# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ. ಹೆಚ್. ರಸ್ತೆ, ತುಮಕೂರು – 572 103

ಸಂಖ್ಯೆ:ತುವಿ:ಖ.ಕೋ:15:2026-27/663 ದಿನಾಂಕ:26.05.2026

## ದರಪಟ್ಟಿ ಆಹ್ವಾನ

**ವಿಷಯ: ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಧ್ಯಾನಸ್ಥ ಗಾಂಧೀಜಿಯವರ ಭಾವಚಿತ್ರವನ್ನು ಮತ್ತು ಅವರು ಬೋಧಿಸಿದ ಸಪ್ತ ಸಾಮಾಜಿಕ ಪಾತಕಗಳನ್ನು ಸರಬರಾಜು ಪಡೆಯುವ ಸಂಬಂಧ ದರಪಟ್ಟಿಗಳನ್ನು ಆಹ್ವಾನಿಸಿರುವ ಕುರಿತು.**

**ಉಲ್ಲೇಖ:** 1. ಕಾರ್ಯನಿರ್ವಾಹಕ ನಿರ್ದೇಶಕರು ಇವರ ಪತ್ರ ಸಂ:ಕರಾಉಶಿಪ/87/ಗಾಂಧಿ ಭಾರತ/2024-25/750 ದಿನಾಂಕ:25.09.2025
2. ವಿ.ವಿ. ಆದೇಶ ಸಂಖ್ಯೆ:ತುವಿ:ಡಿಇವಿ-02:2025-26/2253 ದಿನಾಂಕ:27.10.2025
3. ವಿ.ವಿ ಅಧಿಸೂಚನೆ ಪತ್ರದ ಸಂಖ್ಯೆ: ತುವಿತು:ಕೆ.ಟಿ.ಪಿ.ಪಿ/ತಿ.ಪ/ಖ.ಕೋ/2022-23/3095 ದಿನಾಂಕ: 09.09.2022
4. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 23.05.2026

* * * * *

ಮೇಲ್ಕಂಡ ವಿಷಯ ಮತ್ತು ಉಲ್ಲೇಖಗಳಿಗೆ ಸಂಬಂಧಿಸಿದಂತೆ, ತುಮಕೂರು ವಿಶ್ವವಿದ್ಯಾನಿಲಯಕ್ಕೆ ಈ ಕೆಳಕಂಡ ಕೋಷ್ಟಕದಲ್ಲಿನ ಸಂರಚನೆಯುಳ್ಳ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಧ್ಯಾನಸ್ಥ ಗಾಂಧೀಜಿಯವರ ಭಾವಚಿತ್ರವನ್ನು ಮತ್ತು ಅವರು ಬೋಧಿಸಿದ ಸಪ್ತ ಸಾಮಾಜಿಕ ಪಾತಕಗಳನ್ನು ಸರಬರಾಜು ಪಡೆಯುವ ಸಂಬಂಧ ಆಸಕ್ತ ನೊಂದಾಯಿತ ಸಂಸ್ಥೆಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ.

| ಕ್ರ.ಸಂ. | ಸಂರಚನೆ | ಅಂದಾಜು ಪ್ರಮಾಣ | ದರ |
|---|---|---|---|
| 01 | 24X18 inch (Color Print + Matt Lamination +Fiber Framing (Rose wood Type) | 50 | |

**ಷರತ್ತು ಮತ್ತು ನಿಬಂಧನೆಗಳು:**

1. ಲಕೋಟೆಯ ಮೇಲೆ **"ಧ್ಯಾನಸ್ಥ ಗಾಂಧೀಜಿಯವರ ಭಾವಚಿತ್ರವನ್ನು ಮತ್ತು ಅವರ ಸಪ್ತ ಪಾತಕಗಳನ್ನು ಸರಬರಾಜು ಪಡೆಯುವ ಸಂಬಂಧ ದರಪಟ್ಟಿ"** ಎಂದು ಸ್ಪಷ್ಟವಾಗಿ ನಮೂದಿಸತಕ್ಕದ್ದು.
2. ವಿಶ್ವವಿದ್ಯಾನಿಲಯವು ಸೂಚಿಸುವ ಸ್ಥಳಕ್ಕೆ ಭಾವಚಿತ್ರಗಳನ್ನು ಅಳವಡಿಸುವ ಸಂಬಂಧ ಸಾಗಾಣಿಕ ವೆಚ್ಚವನ್ನು ಸರಬರಾಜುದಾರರೇ ಭರಿಸತಕ್ಕದ್ದು.
3. ಭಾವಚಿತ್ರಗಳ ಪ್ರಮಾಣಗಳನ್ನು ಹೆಚ್ಚಿಸುವ ಅಥವಾ ಕಡಿಮೆಗೊಳಿಸುವ ಹಕ್ಕನ್ನು ವಿಶ್ವವಿದ್ಯಾನಿಲಯವು ಕಾಯ್ದಿರಿಸಿಕೊಂಡಿರುತ್ತದೆ.
4. ದರಪಟ್ಟಿಯನ್ನು ಸಲ್ಲಿಸಲು ಕೊನೆಯ ದಿನಾಂಕ: **08.06.2026** ಅಪರಾಹ್ನ **03.30** ಗಂಟೆ.
5. ದರಪಟ್ಟಿಗಳನ್ನು **ಕುಲಸಚಿವರು, ವಿಶ್ವವಿದ್ಯಾನಿಲಯ ಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ, ಬಿ.ಹೆಚ್. ರಸ್ತೆ, ತುಮಕೂರು-572 103** ಇವರಿಗೆ ಮುದ್ದಾಂ ಅಥವಾ ಅಂಚೆಯ ಮೂಲಕ ತಲುಪಿಸಬಹುದು. ಅಂಚೆಯ ವಿಳಂಬಕ್ಕೆ ಅಥವಾ ಅಂಚೆಯು ತಲುಪದಿದ್ದಲ್ಲಿ ವಿಶ್ವವಿದ್ಯಾನಿಲಯವು ಜವಾಬ್ದಾರರಾಗುವುದಿಲ್ಲ.
6. ದರಪಟ್ಟಿ ಸಲ್ಲಿಸುವ ಸಂಸ್ಥೆಯವರು ತಮ್ಮ ಸಂಸ್ಥೆಯ GSTIN No. ಮತ್ತು PAN No. ದಾಖಲೆಗಳನ್ನು ದರಪಟ್ಟಿಯ ಜೊತೆಗೆ ಲಗತ್ತಿಸತಕ್ಕದ್ದು.
7. ದರಪಟ್ಟಿಯಲ್ಲಿ ನಮೂದಿಸುವ ದರಗಳು ತೆರಿಗೆ, ಸಾಗಾಣಿಕಾ ವೆಚ್ಚ, ಅಳವಡಿಸುವ ವೆಚ್ಚ ಮತ್ತು ಇತರೆ ಸೇವೆಯ ಮೊತ್ತವನ್ನು ಒಳಗೊಂಡಿರತಕ್ಕದ್ದು.
8. ದರಪಟ್ಟಿಯನ್ನು ಅಂಗೀಕರಿಸುವಾಗ ಸಂಸ್ಥೆಗಳು ಸಲ್ಲಿಸಿದ ದರಪಟ್ಟಿಗಳಲ್ಲಿ ಅತೀ ಕಡಿಮೆ ದರಗಳನ್ನು ಪರಿಗಣಿಸಲಾಗುವುದು.
9. ಭಾವಚಿತ್ರದ ಸಂರಚನೆಯಲ್ಲಿ ವ್ಯತ್ಯಾಸ/ಬದಲಾವಣೆಗಳಿದ್ದಲ್ಲಿ ಅಂತವುಗಳನ್ನು ಸ್ವೀಕರಿಸಲಾಗುವುದಿಲ್ಲ.
10. ದರಪಟ್ಟಿಗಳ ಆಯ್ಕೆಯ ವಿಷಯದಲ್ಲಿ ತುಮಕೂರು ವಿಶ್ವವಿದ್ಯಾನಿಲಯವು ರಚಿಸಿಕೊಂಡಿರುವ ನಿಯಮಾವಳಿಗೆ ಬದ್ಧವಾಗಿ ಆಯ್ಕೆ ಮಾಡಲಾಗುವುದು ಮತ್ತು ಇದರಲ್ಲಿ ವಿಶ್ವವಿದ್ಯಾನಿಲಯದ ತೀರ್ಮಾನವೇ ಅಂತಿಮವಾಗಿರುತ್ತದೆ.

(ಪು.ತಿ.ನೋ)

11. ಸರಬರಾಜು ಆದೇಶದಲ್ಲಿ ನೀಡುವ ಎಲ್ಲಾ ಷರತ್ತುಗಳನ್ನು ಪಾಲಿಸಬೇಕು.
12. ದರಪಟ್ಟಿಗಳನ್ನು ಯಾವುದೇ ಕಾರಣ ನೀಡದೆ ಅಂಗೀಕರಿಸುವ ಅಥವಾ ತಿರಸ್ಕರಿಸುವ ಸಂಪೂರ್ಣ ಹಕ್ಕನ್ನು ವಿಶ್ವವಿದ್ಯಾನಿಲಯವು ಕಾಯ್ದಿರಿಸಿಕೊಂಡಿದೆ.
13. ಪ್ರತಿ ಸಂಸ್ಥೆಯವರು ಏಕೈಕ ದರಪಟ್ಟಿಯನ್ನು ಮಾತ್ರ ಸಲ್ಲಿಸತಕ್ಕದ್ದು.
14. ಹೆಚ್ಚಿನ ವಿವರಗಳು ಅಥವಾ ಮಾಹಿತಿಯು ಅಗತ್ಯವಿದ್ದಲ್ಲಿ **ಕುಲಸಚಿವರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು** ಇವರನ್ನು ಸಂಪರ್ಕಿಸಬಹುದು.

**ಆದೇಶದ ಮೇರೆಗೆ**

ಉಪಕುಲಸಚಿವರು
ಉಪಕುಲಸಚಿವರು
ಖರೀದಿ ಕೋಶ
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಪ್ರತಿಗಳು:

1. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು. (ಇಂಟರ್ನೆಟ್‌ನಲ್ಲಿ ಪ್ರಕಟಿಸತಕ್ಕದ್ದು)
2. ಡಾ. ಎ. ಎಂ. ಮಂಜುನಾಥ್, ನಿರ್ದೇಶಕರು, ದೈಹಿಕ ಶಿಕ್ಷಣ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು – ಮಾಹಿತಿಗಾಗಿ.
3. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಮಾನ್ಯ ಕುಲಸಚಿವರ ಆಪ್ತ ಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಕಚೇರಿ ಪ್ರತಿ.